## ಕರ್ನಾಟಕ ವಿಧಾನ ಪರಿಷತ್ತು

ಮಾನ್ಯ ವಿಧಾನ ಪರಿಷತ್ತು ಸದಸ್ಯರುಗಳಾದ ಶ್ರೀ ನಿರಾಣಿ ಹಣಮಂತ್ ರುದ್ರಪ್ಪ, ಶ್ರೀ ಛಲವಾದಿ.ಟಿ ನಾರಾಯಣಸ್ವಾಮಿ, ಶ್ರೀಮತಿ ಹೇಮಲತಾ ನಾಯಕ್ ಹಾಗೂ ಶ್ರೀ ಕೇಶವ ಪ್ರಸಾದ್.ಎಸ್ ಇವರುಗಳ ನಿಯಮ 330 ಕ್ಕೆ ಉತ್ತರಿಸುವ ಬಗ್ಗೆ.

**ಸೂಚನೆ:**

ಪರಿಶಿಷ್ಟ ಜಾತಿ ಮತ್ತು ಪಂಗಡ ಶೈಕ್ಷಣಿಕ ಜಾಗೃತಿ ಹೆಚ್ಚಾದಂತೆ ವಸತಿ ಶಾಲೆ ಹಾಗೂ ಹಾಸ್ಟೆಲ್ ಅವಲಂಬನೆ ಹೆಚ್ಚಾಗಿದೆ. ವರ್ಷದಿಂದ ವರ್ಷಕ್ಕೆ ಬೇಡಿಕೆ ವಿಪರೀತವಾಗಿದೆ. ಆದರೆ, ಬಣ್ಣ ಬಣ್ಣದ ಕನಸು ಕಟ್ಟಿಕೊಂಡು ವಸತಿ ಶಾಲೆ, ಹಾಸ್ಟೆಲ್‌ಗೆ ಪ್ರವೇಶ ಪಡೆಯುವ ಮಕ್ಕಳಿಗೆ ಮೊದಲು ದರ್ಶನವಾಗುವುದೇ ಸೌಲಭ್ಯಗಳ ಮರೀಚಿಕೆಯ ತೋರಣ. ಕಾಲಕಾಲಕ್ಕೆ ಸರ್ಕಾರವು ಸಮಸ್ಯೆಯ ಆಳ ಅರಿಯದ ಪರಿಣಾಮ ಹಾಸ್ಟೆಲ್ ಮತ್ತು ವಸತಿ ಶಾಲೆಗಳಲ್ಲಿ ಸಮಸ್ಯೆಗಳು ಬೃಹದಾಕಾರವಾಗಿ ಬೆಳೆದು ನಿಂತಿದ್ದು, ಮಕ್ಕಳು ಸೌಲಭ್ಯ ಸಿಗದೆ ಅಕ್ಷರಶಃ ಶೋಷಣೆಗೆ ಒಳಗಾಗುತ್ತಿದ್ದಾರೆ. ಸಮಾಜ ಕಲ್ಯಾಣ ಇಲಾಖೆಯಡಿ ನಿರ್ವಹಣೆಯಾಗುತ್ತಿರುವ ಹಾಸ್ಟೆಲ್, ವಸತಿ ನಿಲಯಗಳು ಗುಣಮಟ್ಟದ ಆಹಾರದ ಕೊರತೆ, ಆಶ್ರಯ ಕೊರತೆ, ಮೂಲಸೌಕರ್ಯಗಳ ಕೊರತೆ, ನಿರ್ವಹಣೆಯ ಕೊರತೆ, ವಾರ್ಡನ್‌ಗಳ ಕೊರತೆ ಮತ್ತು ಹೀಗೆ ಹತ್ತಾರು ಸಮಸ್ಯೆಗಳನ್ನು ಎದುರಿಸುತ್ತಿವೆ. ಹಾಸ್ಟೆಲ್‌ಗಳು ಮತ್ತು ವಸತಿ ಶಾಲೆಗಳು ದುಸ್ಥಿತಿಯಲ್ಲಿವೆ. ಅಲ್ಲಿ ಸರಿಯಾದ ಶೌಚಗೃಹ, ಸ್ನಾನಗೃಹಗಳು ಇಲ್ಲದೇ ತೆರೆದ ಜಾಗದಲ್ಲಿ ನಿತ್ಯಕರ್ಮಗಳನ್ನು ಪೂರೈಸಬೇಕಿದೆ. ಹೀಗೆ ಹಲವಾರು ಸಮಸ್ಯೆಗಳನ್ನು ಎದುರಿಸುತ್ತಿರುವ ವಸತಿ ಶಾಲೆಗಳು ಮತ್ತು ಹಾಸ್ಟೆಲ್‌ಗಳಲ್ಲಿ ಕಲಿಕೆ ಮಾಡುತ್ತಿರುವ ಸಾವಿರಾರು ವಿದ್ಯಾರ್ಥಿಗಳು ಸಂಕಷ್ಟದಲ್ಲಿದ್ದು, ಅವರ ಕಲಿಕೆಗೆ ಕಷ್ಟವಾಗುತ್ತಿರುವ ವಿಷಯವನ್ನು ಸದನದಲ್ಲಿ ಪ್ರಸ್ತಾಪಿಸ ಬಯಸುತ್ತೇನೆ.

**ಉತ್ತರ:**

**ಸಮಾಜ ಕಲ್ಯಾಣ ಇಲಾಖೆ ವಿವರ:**

ಸಮಾಜ ಕಲ್ಯಾಣ ಇಲಾಖೆಯ ವತಿಯಿಂದ 1226 ಮೆಟ್ರಿಕ್ ಪೂರ್ವ ವಿದ್ಯಾರ್ಥಿ ನಿಲಯಗಳನ್ನು ಹಾಗೂ 680 ಮೆಟ್ರಿಕ್ ನಂತರದ ವಿದ್ಯಾರ್ಥಿನಿಲಯಗಳನ್ನು ನಿರ್ವಹಿಸಲಾಗುತ್ತಿದೆ, ವಿವರ ಕೆಳಕಂಡಂತಿದೆ.

| ಕ್ರ.ಸಂ | ನಿಲಯಗಳ ವಿವರ | ವಿದ್ಯಾರ್ಥಿ ನಿಲಯಗಳ ಸಂಖ್ಯೆ | | |
|---|---|---|---|---|
| | | ಬಾಲಕ | ಬಾಲಕಿ | ಒಟ್ಟು |
| 01 | ಮೆಟ್ರಿಕ್ ಪೂರ್ವ ವಿದ್ಯಾರ್ಥಿ ನಿಲಯಗಳು | 927 | 299 | 1226 |
| 02 | ಮೆಟ್ರಿಕ್ ನಂತರ ವಿದ್ಯಾರ್ಥಿ ನಿಲಯಗಳು | 399 | 281 | 680 |
| | ಒಟ್ಟು :- | **1326** | **580** | **1906** |

**ವಿದ್ಯಾರ್ಥಿ ನಿಲಯಗಳ ಪ್ರವೇಶ:-**

- 2023-24ನೇ ಸಾಲಿಗೆ ಇಲಾಖೆಯ ವಿದ್ಯಾರ್ಥಿ ನಿಲಯಗಳಿಗೆ ಕೆಳಕಂಡಂತೆ ವಿದ್ಯಾರ್ಥಿಗಳು ದಾಖಲಾಗಿರುತ್ತದೆ ವಿವರ ಕೆಳಕಂಡಂತಿದೆ.

| ಕ್ರ.ಸಂ | ನಿಲಯಗಳ ವಿವರ | ಮಂಜೂರಾತಿ ಸಂಖ್ಯೆ | ದಾಖಲಾತಿ ಸಂಖ್ಯೆ |
|---|---|---|---|
| 01 | ಮೆಟ್ರಿಕ್ ಪೂರ್ವ ವಿದ್ಯಾರ್ಥಿ ನಿಲಯಗಳು | 90,851 | 1,00,459 |
| 02 | ಮೆಟ್ರಿಕ್ ನಂತರ ವಿದ್ಯಾರ್ಥಿ ನಿಲಯಗಳು | 73,751 | 1,10,121 |
| | ಒಟ್ಟು :- | **1,64,602** | **2,10,580** |

- ಸರ್ಕಾರದ ಸುತ್ತೋಲೆ ಸಂಖ್ಯೆ:ಸಕಇ 87 ಸಮನ್ವಯ 2013, ದಿನಾಂಕ:20-07-2013 ರನ್ವಯ ಇಲಾಖೆಯ ವಿದ್ಯಾರ್ಥಿನಿಲಯಗಳಿಗೆ ಪ್ರವೇಶ ಕೋರಿ ಅರ್ಜಿ ಸಲ್ಲಿಸುವ ಎಲ್ಲಾ ಅರ್ಹ ಪ.ಜಾತಿ/ಪ.ಪಂಗಡದ ವಿದ್ಯಾರ್ಥಿಗಳಿಗೆ ನಿಲಯದಲ್ಲಿ ಪ್ರವೇಶ ಕಲ್ಪಿಸಲಾಗುತ್ತಿದೆ.
- 2024-25ನೇ ಸಾಲಿನಿಂದ ಸರ್ಕಾರದ ಆದೇಶ ಸಂಖ್ಯೆ: ಸಕಇ 143 ಪಕವಿ 2023, ದಿನಾಂಕ:20.12.2023 ಸಮಾಜ ಕಲ್ಯಾಣ ಇಲಾಖೆಯ ಮೆಟ್ರಿಕ್ ಪೂರ್ವ / ಮೆಟ್ರಿಕ್ ನಂತರದ ವಿದ್ಯಾರ್ಥಿ ನಿಲಯ ಹಾಗೂ ಡಾ|| ಬಿ.ಆರ್.ಅಂಬೇಡ್ಕರ್ ವಸತಿ ಶಾಲೆಯ ಪ್ರವೇಶಾತಿಯನ್ನು ಈ ಹಿಂದೆ ಅನುಸರಿಸುತ್ತಿದ್ದ ತಂತ್ರಾಂಶವಾದ HOSTEL MANAGEMENT INFORMATION SYSTEM (HMIS) ಮೂಲಕವೇ ಕೈಗೊಳ್ಳಲು ಆದೇಶಿಸಿದೆ. ಅದರಂತೆ ಸಮಾಜ ಕಲ್ಯಾಣ ಇಲಾಖೆಯ ವಿದ್ಯಾರ್ಥಿ ನಿಲಯಗಳ ಪ್ರವೇಶ ಕೋರಿ ಅರ್ಜಿ ಸಲ್ಲಿಸುವ ವ್ಯವಸ್ಥೆಯನ್ನು ಆನ್‌ಲೈನ್ ಮೂಲಕ ಇಲಾಖೆ ವೆಬ್‌ಸೈಟ್‌ನ HOSTEL MANAGEMENT INFORMATION SYSTEM (HMIS) ತಂತ್ರಾಂಶದ ಮೂಲಕ ಅನುಷ್ಠಾನಗೊಳಿಸಲಾಗುತ್ತಿದ್ದು, 2024-25ನೇ ಸಾಲಿಗೆ ಪ್ರವೇಶ ಪ್ರಕ್ರಿಯೆ ಜಾರಿಯಲ್ಲಿರುತ್ತದೆ.
- ಇಲಾಖೆಯ ವಿದ್ಯಾರ್ಥಿ ನಿಲಯಗಳಲ್ಲಿ ಮಂಜೂರಾತಿ ಸಂಖ್ಯೆಗಿಂತ ಹೆಚ್ಚಿನ ಸಂಖ್ಯೆಯಲ್ಲಿ ಅರ್ಜಿಗಳು ಸ್ವೀಕೃತವಾಗುವ ವಿದ್ಯಾರ್ಥಿ ನಿಲಯಗಳ ಕಟ್ಟಡದ ಸಾಮರ್ಥ್ಯನುಸಾರ ಪ್ರವೇಶಾವಕಾಶ ಕಲ್ಪಿಸಲಾಗುತ್ತಿದೆ ಹೆಚ್ಚುವರಿ ವಿದ್ಯಾರ್ಥಿಗಳನ್ನು ಬಾಡಿಗೆ ಕಟ್ಟಡ ಪಡೆದು ಪ್ರವೇಶಾತಿ ಕಲ್ಪಿಸಲು ಕ್ರಮವಹಿಸಲಾಗುತ್ತಿದೆ.
- ಆಯುಕ್ತರು, ಸಮಾಜ ಕಲ್ಯಾಣ ಇಲಾಖೆ ಇವರ ಸುತ್ತೋಲೆ ಸಂಖ್ಯೆ:ಸಕನಿ:ಇಡಿ-6:ಕ.ಬಾಡಿಗೆ:ಸಿಆರ್02/2018-19, ದಿನಾಂಕ:09-05-2019ರಲ್ಲಿ ಹೆಚ್ಚುವರಿ ಬಾಡಿಗೆ ಕಟ್ಟಡವನ್ನು ಪಡೆಯುವ ಸಂದರ್ಭದಲ್ಲಿ ಸದರಿ ಕಟ್ಟಡದಲ್ಲಿನ ವಿದ್ಯಾರ್ಥಿಗಳ ಕೊಠಡಿ, ಅಡುಗೆ ಕೋಣೆ, ಉಗ್ರಾಣ, ಊಟದ ಕೊಠಡಿ, ಶೌಚಾಲಯ, ಸ್ನಾನದಗೃಹ, ವಾಸದ ಕೊಠಡಿ,

ಕಂಪ್ಯೂಟರ್/ ರೀಡಿಂಗ್ ರೂಂ, ಮೆಡಿಕಲ್ ರೂಂ ಮತ್ತು ಆಫೀಸ್ ರೂಂಗಳು ಯಾವ ಯಾವ ವಿಸ್ತೀರ್ಣವನ್ನು ಒಳಗೊಂಡಿರಬೇಕು ಎಂಬುದರ ಬಗ್ಗೆ ಸುತ್ತೋಲೆಯನ್ನು ಹೊರಡಿಸಿ ಅದರಂತೆಯೇ ಹೆಚ್ಚುವರಿ ಬಾಡಿಗೆ ಕಟ್ಟಡಗಳನ್ನು ಪಡೆಯಲು ಎಲ್ಲಾ ಜಿಲ್ಲೆಗಳ ಜಂಟಿ/ಉಪ ನಿರ್ದೇಶಕರು ಸಮಾಜ ಕಲ್ಯಾಣ ಇಲಾಖೆ ರವರಿಗೆ ನಿರ್ದೇಶನ ನೀಡಲಾಗಿರುತ್ತದೆ.

**ಸಿಬ್ಬಂದಿ ವಿವರ:-**

- ಸಮಾಜ ಕಲ್ಯಾಣ ಇಲಾಖಾ ವ್ಯಾಪ್ತಿಯಲ್ಲಿನ ವಿದ್ಯಾರ್ಥಿ ನಿಲಯಗಳ ಸಮರ್ಪಕ ನಿರ್ವಹಣೆಗಾಗಿ ಈ ಕೆಳಕಂಡಂತೆ ಸಿಬ್ಬಂದಿಯನ್ನು ಸೃಜನೆ ಇರುತ್ತದೆ.

| ಕ್ರ. ಸಂ. | ಹುದ್ದೆಯ ಹೆಸರು | ಮಂಜೂರಾತಿ | ಭರ್ತಿ | ಖಾಲಿ |
|---|---|---|---|---|
| 1 | ಸೀನಿಯರ್ ವಾರ್ಡನ್ | 61 | 58 | 3 |
| 2 | ವಾರ್ಡನ್ | 1829 | 1284 | 545 |
| 3 | ಜೂನಿಯರ್ ವಾರ್ಡನ್ | 518 | 465 | 53 |
| | **ಒಟ್ಟು:-** | **2408** | **1807** | **601** |

ವಾರ್ಡನ್ ಹುದ್ದೆಗೆ ಸಂಬಂಧಿಸಿದಂತೆ ನೇರ ನೇಮಕಾತಿ ಕೋಟಾದಡಿ ಖಾಲಿ ಇದ್ದ 232 ಹುದ್ದೆಗಳ ಭರ್ತಿಗೆ ಆರ್ಥಿಕ ಇಲಾಖೆಯ ಸಹಮತಿ ಕೋರಿ ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಲಾಗಿರುತ್ತದೆ. 253 ವಾರ್ಡನ್ ಹುದ್ದೆಗಳನ್ನು ವಸತಿ ಶಾಲಾ ಶಿಕ್ಷಕರು ಮತ್ತು ಜೂನಿಯರ್ ವಾರ್ಡನ್ ಹುದ್ದೆಯ ನೌಕರರುಗಳಿಂದ ಅರ್ಹ ನೌಕರರುಗಳು ಲಭ್ಯವಾದ ನಂತರದಲ್ಲಿ ಮುಂಬಡ್ತಿ ಮುಖೇನ ಭರ್ತಿ ಮಾಡಬೇಕಾಗಿರುತ್ತದೆ. 03 ಸೀನಿಯರ್ ವಾರ್ಡನ್ ಹುದ್ದೆಗಳನ್ನು ವಾರ್ಡನ್ ಹುದ್ದೆಯ ನೌಕರರುಗಳಿಂದ ಬಡ್ತಿ ಮೂಲಕ ಭರ್ತಿ ಮಾಡಲು ಕ್ರಮವಹಿಸಲಾಗಿದೆ. 53 ಜೂನಿಯರ್ ವಾರ್ಡನ್ ಹುದ್ದೆಗಳನ್ನು ಗ್ರೂಪ್-ಡಿ ವೃಂದದ ಅಡುಗೆಯವರಿಂದ ಭರ್ತಿ ಮಾಡಬೇಕಾಗಿದ್ದು, ಅರ್ಹ ನೌಕರರುಗಳು ಲಭ್ಯವಾದ ನಂತರದಲ್ಲಿ ಮುಂಬಡ್ತಿ ಮುಖೇನ ಭರ್ತಿ ಮಾಡಬೇಕಾಗಿರುತ್ತದೆ.

**ಇಲಾಖೆ ವಿದ್ಯಾರ್ಥಿನಿಲಯಗಳಲ್ಲಿನ ಗುಣಮಟ್ಟವನ್ನು ಅಭಿವೃದ್ಧಿಪಡಿಸಲು ಈ ಕೆಳಕಂಡ ಕ್ರಮಗಳನ್ನು ಕೈಗೊಳ್ಳಲಾಗಿದೆ:-**

- ಇಲಾಖೆಯ ಸರ್ಕಾರಿ ವಸತಿ ಶಾಲೆ ಮತ್ತು ಮೆಟ್ರಿಕ್ ಪೂರ್ವ ಹಾಗೂ ಮೆಟ್ರಿಕ್ ನಂತರದ ವಿದ್ಯಾರ್ಥಿನಿಲಯಗಳ ವಿದ್ಯಾರ್ಥಿಗಳಿಗೆ ಉತ್ತಮ ಗುಣಮಟ್ಟದ ಊಟೋಪಚಾರವನ್ನು ನೀಡಲು ಮೂರು ವಿಭಾಗವಾರು (ಕರಾವಳಿ, ದಕ್ಷಿಣ ಕನ್ನಡ ಮತ್ತು ಉತ್ತರ ಕನ್ನಡ) ಪರಿಷ್ಕೃತ ಮೆನು ಚಾರ್ಟ್ ನಂತೆ ವಿದ್ಯಾರ್ಥಿಗಳಿಗೆ ಊಟೋಪಚಾರವನ್ನು ನೀಡಲಾಗುತ್ತಿದೆ.

- ಸರ್ಕಾರದ ಆದೇಶ ಸಂಖ್ಯೆ: ಸಕಇ 55 ಪಕವಿ 2023, ದಿನಾಂಕ: 05-05-2023 ರಲ್ಲಿ ಪ್ರತಿ ನಿಲಯದಲ್ಲಿ ವಿದ್ಯಾರ್ಥಿಗಳ ಸಹಭಾಗಿತ್ವದಲ್ಲಿಯೇ Mess Committee ಅನ್ನು ರಚಿಸಿ, ಗುಣಮಟ್ಟ ಕಾಯ್ದುಕೊಳ್ಳಲಾಗಿರುತ್ತದೆ ಹಾಗೂ ವಿದ್ಯಾರ್ಥಿನಿಲಯಗಳಲ್ಲಿನ ಶೌಚಾಲಯ ಸ್ವಚ್ಛತೆ ಹಾಗೂ ನೈರ್ಮಲ್ಯದ ಕುರಿತಾಗಿ Sanitazition committee ಯನ್ನು ರಚಿಸಲಾಗಿರುತ್ತದೆ.
- ಆಹಾರ ಪದಾರ್ಥ ಮತ್ತು ಇತರೆ ಸಾಮಗ್ರಿಗಳನ್ನು ಸರಬರಾಜು ಮಾಡುವ ಬಗ್ಗೆ ಎ ಯಿಂದ ಹೆಚ್ ರವರೆಗೆ ಗ್ರೂಪ್‌ವಾರು ವಿಂಗಡಿಸಿ ಆಹಾರ ಸಾಮಗ್ರಿಗಳನ್ನು ಖರೀದಿ ಮಾಡಲು ಪರಿಷ್ಕೃತ ಆದೇಶವನ್ನು ಹೊರಡಿಸಲಾಗಿದೆ.
- ಆಹಾರ ಪದಾರ್ಥಗಳನ್ನು ಸರಬರಾಜು ಮಾಡಲು 2024-25ನೇ ಸಾಲಿನಿಂದ ಜಿಲ್ಲಾ ಮಟ್ಟದಿಂದ 2 ವರ್ಷಗಳ ಅವಧಿಗೆ ಜಿಲ್ಲಾವಾರು ಟೆಂಡರ್ ಆಹ್ವಾನಿಸಲು ಆದೇಶ ಹೊರಡಿಸಲಾಗಿರುತ್ತದೆ.
- ಗುತ್ತಿಗೆದಾರರು ಸರಬರಾಜು ಮಾಡುವ ಆಹಾರ ಪದಾರ್ಥಗಳ ಮಾದರಿಗಳನ್ನು ಜಿಲ್ಲಾ ಹಾಗೂ ತಾಲ್ಲೂಕು ಮಟ್ಟದ ಕಛೇರಿಗಳಲ್ಲಿ ಪ್ರದರ್ಶಿಸಲು ಸುತ್ತೋಲೆ ಹೊರಡಿಸಲಾಗಿರುತ್ತದೆ.
- ಪ್ರತಿ ಜಿಲ್ಲೆಗೂ ರಾಜ್ಯ ಮಟ್ಟದ ಅಧಿಕಾರಿಗಳನ್ನು ನೋಡಲ್ ಅಧಿಕಾರಿಗಳನ್ನಾಗಿ ನಿಯೋಜನೆ ಮಾಡಲಾಗಿರುತ್ತದೆ.
- ಸಮಾಜ ಕಲ್ಯಾಣ ಇಲಾಖೆಯ ಅಧೀನದಲ್ಲಿ ಬರುವ ವಿದ್ಯಾರ್ಥಿ ನಿಲಯಗಳಿಗೆ ಉಪ ವಿಭಾಗಾಧಿಕಾರಿಗಳು ಪ್ರತಿ ಮಾಹೆಯಲ್ಲಿ ಕನಿಷ್ಠ ಒಂದು ಬಾರಿ ಹಾಗೂ ತಾಲ್ಲೂಕಿನ ತಹಶಿಲ್ದಾರ್‌ರು ಪ್ರತಿ ಮಾಹೆಯಲ್ಲಿ ಕನಿಷ್ಠ 2 ಬಾರಿ ಅನಿರೀಕ್ಷಿತ ಬೇಟಿ ನೀಡಿ ವರದಿ ಮಾಡುವಂತೆ ಆದೇಶಿಸಿದೆ.
- ಜಿಲ್ಲಾ ಮಟ್ಟದ ಅಧಿಕಾರಿಗಳು ಖುದ್ದು ಭೇಟಿ ನೀಡಿ ರುಚಿ/ಸಾಧಾರಣ ರುಚಿ ಹೊಂದಿರುವ ನಿಲಯಗಳಿಗೆ ಭೇಟಿ ನೀಡಿದ ಸಮಯದಲ್ಲಿ Taste Register ನಲ್ಲಿ ನಮೂದಿಸಿ, ಕೇಂದ್ರ ಕಛೇರಿಗೆ ವರದಿ ಮಾಡಲು ಮಾನ್ಯ ಆಯುಕ್ತರಿಂದ ಸುತ್ತೋಲೆ ಹೊರಡಿಸಲಾಗಿದೆ.
- ಮೂಲಭೂತ ಸೌಕರ್ಯಗಳನ್ನು ಕಲ್ಪಿಸುವ ಸಂಬಂಧ ರಾಜ್ಯವಲಯದಿಂದ ನಿಲಯಗಳಿಗೆ ಅಗತ್ಯವಿರುವ ಸಾಮಗ್ರಿಗಳಾದ ಟೂ ಟಯರ್ ಕಾಟ್, ಸೋಲಾರ್ ವಾಟರ್ ಹೀಟರ್, ಡೈನಿಂಗ್ ಟೇಬಲ್, ಡೀಸೆಲ್ ಜನರೇಟರ್, ಕಾಯರ್ ಮ್ಯಾಟ್ರಸ್ ಮತ್ತು ಪಿಲ್ಲೋ, ಸಿಸಿಟಿವಿ ಕ್ಯಾಮರಾಗಳನ್ನು ಕೆಟಿಪಿಪಿ ನಿಯಮಾವಳಿಗಳನ್ವಯ ಇ-ಟೆಂಡರ್ ಮೂಲಕ ಖರೀದಿಸಿ ಪೂರೈಸಲಾಗುತ್ತಿದೆ.

- ವಿದ್ಯಾರ್ಥಿ ನಿಲಯಗಳಲ್ಲಿ ಅಗತ್ಯವಿರುವ ಇತರೆ ಮೂಲಭೂತ ಸಾಮಗ್ರಿಗಳಾದ ಯುಪಿಎಸ್, ವಾಟರ್ ಪ್ಯೂರಿಫೈರ್, ಲೈಬ್ರರಿ ಬುಕ್ಸ್, ಕ್ರೀಡಾ ಸಾಮಗ್ರಿಗಳು, ಇನ್ಸಿನೇಟರ್, ಬೆಂಕಿ ನಂದಿಸುವ ಉಪಕರಣ, ಪಾತ್ರೆ ಪರಿಕರಗಳು ಹಾಗೂ ಇತರೆ ತುರ್ತು ಸಾಮಗ್ರಿಗಳ ಖರೀದಿಗಾಗಿ ಜಿಲ್ಲಾ ಮಟ್ಟಗಳಲ್ಲಿ ಅನುಷ್ಠಾನಗೊಳಿಸಲು ಅನುದಾನವನ್ನು ಜಿಲ್ಲೆಗಳಿಗೆ ಬಿಡುಗಡೆ ಮಾಡಲಾಗಿರುತ್ತದೆ.

**ಕೊಠಡಿ ಹಾಗೂ ಶೌಚಾಲಯ:** ವಿದ್ಯಾರ್ಥಿಗಳ ದಾಖಲಾತಿ ಸಂಖ್ಯೆಗೆ ಅನುಗುಣವಾಗಿ ಹೆಚ್ಚುವರಿ ವಾಸದ ಕೊಠಡಿ, ಶೌಚಾಲಯ, ಸ್ನಾನಗೃಹಗಳನ್ನು ನಿರ್ಮಾಣ ಹಾಗೂ ಅಗತ್ಯ ದುರಸ್ತಿ/ಉನ್ನತೀಕರಣ ಕಾಮಗಾರಿಗಳನ್ನು ಕೈಗೊಳ್ಳುವ ಸಂಬಂಧವಾಗಿ ಸಂಬಂಧಪಟ್ಟ ಜಿಲ್ಲೆಗಳ ಜಿಲ್ಲಾಧಿಕಾರಿಗಳ ಮೂಲಕ ಸೂಕ್ತ ಪ್ರಸ್ತಾವನೆ ಪಡೆದು ಅನುದಾನ ಲಭ್ಯತೆಯನ್ನು ಆಧರಿಸಿ ಕಾಮಗಾರಿಗಳನ್ನು ಕೈಗೊಳ್ಳಲು ಕ್ರಮ ವಹಿಸಲಾಗುತ್ತಿದೆ.

- 2024-25ನೇ ಸಾಲಿಗೆ ಪ್ರವೇಶ ಪ್ರಕ್ರಿಯೆ ಜಾರಿಯಲ್ಲಿದ್ದು, ಈವರೆವಿಗೆ ವಿದ್ಯಾರ್ಥಿ ನಿಲಯಗಳಿಗೆ ದಾಖಲಾಗಿರುವ ವಿದ್ಯಾರ್ಥಿಗಳ ವಿವರ ಕೆಳಕಂಡಂತಿದೆ.

| ಕ್ರ.ಸಂ | ನಿಲಯಗಳ ವಿವರ | ಮಂಜೂರಾತಿ ಸಂಖ್ಯೆ | ದಾಖಲಾತಿ ಸಂಖ್ಯೆ |
|---|---|---|---|
| 01 | ಮೆಟ್ರಿಕ್ ಪೂರ್ವ ವಿ ನಿಲಯಗಳು | 90,851 | 76,691 |
| 02 | ಮೆಟ್ರಿಕ್ ನಂತರ ವಿ ನಿಲಯಗಳು | 73,751 | 74,293 |
| | ಒಟ್ಟು :- | **1,64,602** | **1,50,984** |

**ವಿದ್ಯಾರ್ಥಿ ನಿಲಯಗಳ ಫಲಿತಾಂಶ:-**

- 2023-24ನೇ ಸಾಲಿಗೆ ಇಲಾಖೆಯ ವಿದ್ಯಾರ್ಥಿ ನಿಲಯಗಳಲ್ಲಿ ವ್ಯಾಸಂಗ ಮಾಡುತ್ತಿರುವ ಎಸ್‌ಎಸ್‌ಎಲ್‌ಸಿ ಹಾಗೂ ದ್ವಿತೀಯ ಪಿಯುಸಿ ತರಗತಿಗಳಲ್ಲಿ ವಿದ್ಯಾರ್ಥಿಗಳು ಉತ್ತಮ ಫಲಿತಾಂಶವನ್ನು ಪಡೆದಿರುತ್ತಾರೆ. ವಿವರ ಕೆಳಕಂಡಂತಿದೆ.

| ಕ್ರ. ಸಂ. | ವಿವರ | ಪರಿಕ್ಷೇಗೆ ಹಾಜರಾದ ವಿದ್ಯಾರ್ಥಿಗಳು | ಉತ್ತೀರ್ಣರಾದ ವಿದ್ಯಾರ್ಥಿಗಳು | ಶೇಕಡವಾರು ಫಲಿತಾಂಶ |
|---|---|---|---|---|
| 1 | ಎಸ್‌ಎಸ್‌ಎಲ್‌ಸಿ | 18,559 | 13,496 | 72.72% |
| 2 | ದ್ವಿತೀಯ ಪಿಯುಸಿ | 19,397 | 16,019 | 82.58% |

ಒಟ್ಟಾರೆಯಾಗಿ ಸಮಾಜ ಕಲ್ಯಾಣ ಇಲಾಖೆ ಅಧೀನದಲ್ಲಿ ಕಾರ್ಯನಿರ್ವಹಿಸುತ್ತಿರುವ ವಸತಿ ಶಾಲೆ ಹಾಗೂ ವಿದ್ಯಾರ್ಥಿ ನಿಲಯಗಳನ್ನು ಸಮರ್ಪಕವಾಗಿ ನಿರ್ವಹಣೆ ಮಾಡುವ ಬಗ್ಗೆ ಹಾಗೂ ವಿದ್ಯಾರ್ಥಿ ನಿಲಯಗಳಲ್ಲಿ ದಾಖಲಾಗುವ ವಿದ್ಯಾರ್ಥಿಗಳಿಗೆ ಎಲ್ಲಾ ರೀತಿಯ ಮೂಲಭೂತ ಸೌಕರ್ಯಗಳನ್ನು ಕಲ್ಪಿಸಲು ಮತ್ತು ವಿದ್ಯಾರ್ಥಿಗಳ ಶೈಕ್ಷಣಿಕ ಹಿತದೃಷ್ಟಿಯಿಂದ ಅನುದಾನ ಲಭ್ಯತೆಯನುಸಾರವಾಗಿ ಅಗತ್ಯ ಕ್ರಮಗಳನ್ನು ಕೈಗೊಳ್ಳಲಾಗುತ್ತಿದೆ.

**ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘದ ವ್ಯಾಪ್ತಿಯಡಿ ಕಾರ್ಯನಿರ್ವಹಿಸುತ್ತಿರುವ ವಸತಿ ಶಾಲೆ/ಕಾಲೇಜುಗಳ ವಿವರ:**

ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘದ ವ್ಯಾಪ್ತಿಯಡಿ ಪರಿಶಿಷ್ಟ ಜಾತಿ- 503, ಪರಿಶಿಷ್ಟ ಪಂಗಡ- 144, ಹಿಂದುಳಿದ ವರ್ಗ-174 ಒಟ್ಟಾರೆ 821 ವಸತಿ ಶಾಲೆ/ಕಾಲೇಜುಗಳು ಕಾರ್ಯನಿರ್ವಹಿಸುತ್ತಿವೆ. ಸದರಿ ವಸತಿ ಶಾಲೆಗಳ ಪೈಕಿ 630 ವಸತಿ ಶಾಲೆ/ಕಾಲೇಜುಗಳು ಸ್ವಂತ ಕಟ್ಟಡದಲ್ಲಿ ಕಾರ್ಯನಿರ್ವಹಿಸುತ್ತಿವೆ. ಆಯಾ ಪ್ರದೇಶದಲ್ಲಿ ಸೂಕ್ತ ವ್ಯವಸ್ಥೆಯನ್ನು ಹೊಂದಿರುವ 157 ವಸತಿ ಶಾಲೆ/ಕಾಲೇಜುಗಳು ಕಟ್ಟಡಗಳನ್ನು ಬಾಡಿಗೆ ಪಡೆದು ನಡೆಸಲಾಗುತ್ತಿದೆ. 35 ವಸತಿ ಶಾಲೆ/ಕಾಲೇಜುಗಳನ್ನು ನಡೆಸಲು ಸೂಕ್ತ ಬಾಡಿಗೆ ಕಟ್ಟಡ ದೊರೆತಿಲ್ಲದಿರುವುದರಿಂದ ವಸತಿ ಶಾಲೆಗಳು ಬಾಡಿಗೆ ರಹಿತ/ಸಂಘದ ಸ್ವಂತ ಕಟ್ಟಡದಲ್ಲಿ ಸಂಯೋಜಿತವಾಗಿ ಕಾರ್ಯನಿರ್ವಹಿಸುತ್ತಿವೆ ಹಾಗೂ ಸಂಘದ ವತಿಯಿಂದ ನಿರ್ಮಾಣವಾಗುತ್ತಿರುವ 43 ವಸತಿ ಶಾಲೆ/ಕಾಲೇಜುಗಳ ಕಟ್ಟಡ ಕಾಮಗಾರಿಗಳು ಹಾಗೂ ಲೋಕೋಪಯೋಗಿ/ಕಲ್ಯಾಣ ಕರ್ನಾಟಕ ಪ್ರದೇಶಾಭಿವೃದ್ಧಿ ಮಂಡಳಿಗೆ ವಹಿಸಲಾಗಿರುವ 20 ವಸತಿ ಶಾಲೆಗಳು ಸೇರಿ ಒಟ್ಟು 63 ವಸತಿ ಶಾಲಾ ಕಟ್ಟಡ ನಿರ್ಮಾಣ ಕಾಮಗಾರಿಗಳು ಪ್ರಗತಿಯಲ್ಲಿವೆ. 31 ವಸತಿ ಶಾಲೆ/ಕಾಲೇಜುಗಳ ಶಾಲಾ ಸಂಕೀರ್ಣ ನಿರ್ಮಾಣ ಮಾಡಲು ಟೆಂಡರ್ ಪ್ರಕ್ರಿಯೆಯಲ್ಲಿವೆ ಹಾಗೂ ನಿವೇಶನ ಲಭ್ಯವಿರುವ 81 ವಸತಿ ಶಾಲೆ/ಕಾಲೇಜುಗಳಿಗೆ ಸ್ವಂತ ಕಟ್ಟಡ ನಿರ್ಮಾಣ ಮಾಡಲು ಪ್ರತಿ ವಸತಿ ಶಾಲೆಗೆ ರೂ.18.00 ಕೋಟಿಗಳ ಅಂದಾಜು ಪಟ್ಟಿಗೆ ಆಡಳಿತಾತ್ಮಕ ಅನುಮೋದನೆ ಕೋರಿ ಆರ್ಥಿಕ ಇಲಾಖೆಗೆ ಪ್ರಸ್ತಾವನೆಯನ್ನು ಸಲ್ಲಿಸಲಾಗಿತ್ತು. ಆದರೆ, ಆರ್ಥಿಕ ಇಲಾಖೆಯು ಹೊಸ ಕಾಮಗಾರಿಗಳನ್ನು ತೆಗೆದುಕೊಳ್ಳುವ ಪ್ರಸ್ತಾವನೆಯನ್ನು ಒಪ್ಪಲು ಸಾಧ್ಯವಿಲ್ಲವೆಂದು ಅಭಿಪ್ರಾಯ ನೀಡಿರುತ್ತದೆ.

ಉಳಿದಂತೆ, 17 ವಸತಿ ಶಾಲೆ/ಕಾಲೇಜುಗಳಿಗೆ ನಿವೇಶನ ಲಭ್ಯವಿರುವುದಿಲ್ಲ. ನಿವೇಶನ ಪಡೆಯಲು ನಿವೇಶನ ಲಭ್ಯವಿಲ್ಲದ ಜಿಲ್ಲೆಗಳ ಜಿಲ್ಲಾಧಿಕಾರಿಗಳಿಗೆ ಸರ್ಕಾರಿ ಜಮೀನು ಮಂಜೂರಾತಿ ಮಾಡಲು ಕೋರಿ ಪತ್ರ ಬರೆಯಲಾಗಿದೆ. ಸ್ವಂತ ಕಟ್ಟಡ ಹೊಂದಿರುವ 275 ವಸತಿ ಶಾಲೆ/ಕಾಲೇಜುಗಳ ಕಟ್ಟಡ ದುರಸ್ತಿ ಕಾಮಗಾರಿಗಳನ್ನು ಕೈಗೆತ್ತಿಕೊಂಡಿದ್ದು, ಪ್ರಸ್ತುತ ಟೆಂಡರ್ ಪ್ರಕ್ರಿಯೆಯಲ್ಲಿರುತ್ತವೆ.

ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘದ ವಸತಿ ಶಾಲೆ/ಕಾಲೇಜುಗಳಲ್ಲಿ ವ್ಯಾಸಂಗ ಮಾಡುತ್ತಿರುವ ಪ್ರತಿ ವಿದ್ಯಾರ್ಥಿಗೆ ತಿಂಗಳಿಗೆ ರೂ.1850/- ರಂತೆ ಆಹಾರ ವೆಚ್ಚವನ್ನು ಸರ್ಕಾರ ಮಂಜೂರು ಮಾಡಿದೆ. ಅದರಂತೆ ವಿದ್ಯಾರ್ಥಿಗಳಿಗೆ ವಿಭಾಗವಾರು ಜಿಲ್ಲೆಗಳ ಆಹಾರ ಪದ್ಧತಿ ಕ್ರಮಗಳಂತೆ ಮೆನು ಚಾರ್ಟ ಪ್ರಕಾರ ಉತ್ತಮ ಗುಣಮಟ್ಟದ ಆಹಾರ ಒದಗಿಸಲಾಗುತ್ತಿದೆ. ಮುಂದುವರೆದು, ವಸತಿ ಶಾಲೆ/ ಕಾಲೇಜುಗಳಲ್ಲಿ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳಿಗೆ ಪ್ರಾಯೋಗಿಕವಾಗಿ ಸಿರಿಧಾನ್ಯ ಆಧಾರಿತ ಉಪಹಾರವನ್ನು ಸರಬರಾಜು ಮಾಡುತ್ತಿರುವುದನ್ನು 2ನೇ ಹಂತದಲ್ಲಿ ರಾಜ್ಯದ ಪ್ರತಿ ಕಂದಾಯ ಪ್ರಾದೇಶಿಕ ವಿಭಾಗವಾರು ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘದಿಂದ ಆಯ್ಕೆಯಾಗಿರುವ ಎರಡು ವಸತಿ ಶಾಲೆಗಳಲ್ಲಿ ಸಿರಿಧಾನ್ಯ RCT (Randomized Controlled Trial) ತಂತ್ರಜ್ಞಾನವನ್ನು ಅಳವಡಿಸಿಕೊಂಡು ನುರಿತ ಸಂಸ್ಥೆಗಳಿಂದ ಅಧ್ಯಯನವನ್ನು ಮಾಡಲು ಕ್ರಮವಹಿಸಲಾಗಿದೆ.

ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘದ ವಸತಿ ಶಾಲೆ/ಕಾಲೇಜುಗಳ ವಿದ್ಯಾರ್ಥಿಗಳಿಗೆ ಅಗತ್ಯವಿರುವ ಆಹಾರ, ಸಮವಸ್ತ್ರ, ಶೂ, ಸಾಕ್ಸ್, ಪಠ್ಯಪುಸ್ತಕ, ನೋಟ್ ಪುಸ್ತಕ ಮತ್ತು ಲೇಖನ ಸಾಮಗ್ರಿಗಳು, ಶುಚಿ ಕಿಟ್‌ಗಳನ್ನು ನಿರಂತರವಾಗಿ ಪೂರೈಕೆ ಮಾಡಲಾಗುತ್ತಿದೆ. ಅಲ್ಲದೆ ಸ್ವಂತ ಕಟ್ಟಡ ಹೊಂದಿರುವ ವಸತಿ ಶಾಲೆ/ ಕಾಲೇಜುಗಳ ವಿದ್ಯಾರ್ಥಿಗಳಿಗೆ ಡೆಸ್ಕ್ ಕಂ ಬೆಂಚ್, ಟು-ಟಯರ್ ಕಾಟ್, ಹಾಸಿಗೆ, ದಿಂಬು, ಡೈನಿಂಗ್ ಟೇಬಲ್ ಹಾಗೂ ಇತರೆ ಮೂಲಭೂತ ಸೌಲಭ್ಯಗಳನ್ನು ಹಂತ ಹಂತವಾಗಿ ಅನುದಾನದ ಲಭ್ಯತೆ ಆಧಾರದ ಮೇಲೆ ಒದಗಿಸಲಾಗುತ್ತಿದೆ. ಅದರಂತೆ ಬಾಡಿಗೆ ಕಟ್ಟಡಗಳಲ್ಲಿರುವ ವಸತಿ ಶಾಲೆ/ಕಾಲೇಜುಗಳಲ್ಲಿ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳಿಗೂ ಸಹ ಅನುದಾನ ಲಭ್ಯತೆ ಮೇರೆಗೆ ಅಗತ್ಯ ಮೂಲಭೂತ ಸೌಕರ್ಯಗಳನ್ನು ಒದಗಿಸಲಾಗುತ್ತಿದೆ.

2023-24ನೇ ಸಾಲಿನಲ್ಲಿ ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘದ ಅಧೀನದಲ್ಲಿ ಕಾರ್ಯನಿರ್ವಹಿಸುತ್ತಿರುವ 798 ವಸತಿ ಶಾಲೆಗಳಲ್ಲಿ ಒಟ್ಟು 35,303 SSLC ವಿದ್ಯಾರ್ಥಿಗಳು ಪರೀಕ್ಷೆಗೆ ಹಾಜರಾಗಿದ್ದು, 33,891 ವಿದ್ಯಾರ್ಥಿಗಳು ಉತ್ತೀರ್ಣರಾಗಿದ್ದು, ಶೇ. 96 ರಷ್ಟು ಫಲಿತಾಂಶ ಬಂದಿರುತ್ತದೆ. 360 ವಸತಿ ಶಾಲೆಗಳಲ್ಲಿ ಶೇ. 100 ರಷ್ಟು ಫಲಿತಾಂಶ ಬಂದಿರುತ್ತದೆ. ಮೊರಾರ್ಜಿ ದೇಸಾಯಿ ವಸತಿ ಶಾಲೆ ಮೆಳ್ಳಿಗೇರಿ, ಮುಧೋಳ್, ತಾ|| ಬಾಗಲಕೋಟೆ ಜಿಲ್ಲೆ ಇಲ್ಲಿ ವ್ಯಾಸಂಗ ಮಾಡುತ್ತಿದ್ದ ವಿದ್ಯಾರ್ಥಿನಿಯು 625 ಅಂಕಗಳಿಗೆ 625 ಅಂಕಗಳನ್ನು ಪಡೆದು ರಾಜ್ಯಕ್ಕೆ ಪ್ರಥಮ ಸ್ಥಾನ ಪಡೆದಿರುತ್ತಾರೆ. ಮಂಡ್ಯ ಜಿಲ್ಲೆ ತುಂಬಗೆರೆ ಮೊರಾರ್ಜಿ ದೇಸಾಯಿ ವಸತಿ ಶಾಲೆಯ ಒಬ್ಬ ವಿದ್ಯಾರ್ಥಿಯು 625 ಅಂಕಗಳಿಗೆ 623 ಅಂಕಗಳನ್ನು ಪಡೆದು ದ್ವಿತೀಯ ಸ್ಥಾನ ಪಡೆದಿರುತ್ತಾರೆ. ಒಟ್ಟಾರೆ 27,704 ವಿದ್ಯಾರ್ಥಿಗಳು ಪ್ರಥಮ ಶ್ರೇಣಿ ಮತ್ತು ಪ್ರಥಮ ದರ್ಜೆಯಲ್ಲಿ ಉತ್ತೀರ್ಣರಾಗಿರುತ್ತಾರೆ.

2023-24 ನೇ ಸಾಲಿನಲ್ಲಿ ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘದ ಅಧೀನದಲ್ಲಿ ಕಾರ್ಯನಿರ್ವಹಿಸುತ್ತಿರುವ 84 ಪದವಿ ಪೂರ್ವ ವಿಜ್ಞಾನ ಕಾಲೇಜುಗಳ ದ್ವಿತೀಯ ಪಿಯುಸಿ ಒಟ್ಟಾರೆ ಫಲಿತಾಂಶ ಶೇ.97.68 ಆಗಿರುತ್ತದೆ. 40 ಪದವಿ ಪೂರ್ವ ವಿಜ್ಞಾನ ಕಾಲೇಜುಗಳಲ್ಲಿ ಶೇ. 100ಕ್ಕೆ ಶೇ.100 ರಷ್ಟು ಫಲಿತಾಂಶ ಬಂದಿರುತ್ತದೆ.

ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘದ ವ್ಯಾಪ್ತಿಯಡಿಯಲ್ಲಿ ಕಾರ್ಯನಿರ್ವಹಿಸುತ್ತಿರುವ ಎಲ್ಲಾ 821 ವಸತಿ ಶಾಲೆ/ಕಾಲೇಜುಗಳಲ್ಲಿ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳಿಗೆ ಉತ್ತಮ ಗುಣಮಟ್ಟದ ಶಿಕ್ಷಣ, ಆಹಾರ ಮತ್ತಿತರ ಅವಶ್ಯ ಮೂಲಭೂತ ಸೌಲಭ್ಯಗಳನ್ನು ಅನುದಾನ ಲಭ್ಯತೆ ಆಧಾರದ ಮೇಲೆ ಒದಗಿಸಲು ಹಾಗೂ ಶಾಲೆ/ಕಾಲೇಜುಗಳಲ್ಲಿರುವ ಇನ್ನಿತರೆ ಸಮಸ್ಯೆಗಳನ್ನು ಬಗೆಹರಿಸಿ ಕಾಲ ಕಾಲಕ್ಕೆ ಅಗತ್ಯ ಕ್ರಮಗಳನ್ನು ತೆಗೆದುಕೊಂಡು ವಿದ್ಯಾರ್ಥಿಗಳ ಉತ್ತಮ ಕಲಿಕೆಗೆ ಮುಕ್ತ ಅವಕಾಶವನ್ನು ಕಲ್ಪಿಸಲು ಕ್ರಮವಹಿಸಲಾಗುತ್ತಿದೆ.

ಸಕಇ 171 ಎಂಡಿಎಸ್ 2024

(ಡಾ. ಹೆಚ್.ಸಿ ಮಹದೇವಪ್ಪ)
ಸಮಾಜ ಕಲ್ಯಾಣ ಸಚಿವರು.

# ಕರ್ನಾಟಕ ವಿಧಾನ ಪರಿಷತ್ತು

**ಮಾನ್ಯ ವಿಧಾನ ಪರಿಷತ್ ಸದಸ್ಯರುಗಳಾದ ಶ್ರೀ. ನಿರಾಣಿ ಹಣಮಂತ ರುದ್ರಪ್ಪ, ಶ್ರೀ. ಛಲವಾದಿ ನಾರಾಯಣಸ್ವಾಮಿ, ಶ್ರೀಮತಿ. ಹೇಮಲತಾ ನಾಯಕ್ ಮತ್ತು ಶ್ರೀ. ಕೇಶವ ಪ್ರಸಾದ್ ಎಸ್ ರವರು ನಿಯಮ 330ರಡಿ ಮಂಡಿಸಿರುವ ಸೂಚನೆಗೆ ಉತ್ತರ.**

**ನಿಯಮ 330:**

ಪರಿಶಿಷ್ಟ ಜಾತಿ ಮತ್ತು ಪಂಗಡಗಳಲ್ಲಿ ಶೈಕ್ಷಣಿಕ ಜಾಗೃತಿ ಹೆಚ್ಚಾದಂತೆ ವಸತಿ ಶಾಲೆ ಹಾಗೂ ಹಾಸ್ಟೆಲ್ ಅವಲಂಬನೆ ಹೆಚ್ಚಾಗಿದೆ. ವರ್ಷದಿಂದ ವರ್ಷಕ್ಕೆ ಬೇಡಿಕೆ ವಿಪರೀತವಾಗಿದೆ. ಆದರೆ, ಬಣ್ಣ ಬಣ್ಣದ ಕನಸು ಕಟ್ಟಿಕೊಂಡು ವಸತಿ ಶಾಲೆ, ಹಾಸ್ಟೆಲ್‌ಗೆ ಪ್ರವೇಶ ಪಡೆಯುವ ಮಕ್ಕಳಿಗೆ ಮೊದಲು ದರ್ಶನವಾಗುವುದೇ ಸೌಲಭ್ಯಗಳ ಮರೀಚಿಕೆಯ ತೋರಣ. ಕಾಲಕಾಲಕ್ಕೆ ಸರ್ಕಾರವು ಸಮಸ್ಯೆಯ ಆಳ ಅರಿಯದ ಪರಿಣಾಮ ಹಾಸ್ಟೆಲ್ ಮತ್ತು ವಸತಿ ಶಾಲೆಗಳಲ್ಲಿ ಸಮಸ್ಯೆಗಳು ಬೃಹದಾಕಾರವಾಗಿ ಬೆಳೆದು ನಿಂತಿದ್ದು, ಮಕ್ಕಳು ಸೌಲಭ್ಯ ಸಿಗದೆ ಅಕ್ಷರಶಃ ಶೋಷಣೆಗೆ ಒಳಗಾಗುತ್ತಿದ್ದಾರೆ. ಸಮಾಜ ಕಲ್ಯಾಣ ಇಲಾಖೆಯಡಿ ನಿರ್ವಹಣೆಯಾಗುತ್ತಿರುವ ಹಾಸ್ಟೆಲ್, ವಸತಿ ನಿಲಯಗಳು ಗುಣಮಟ್ಟದ ಆಹಾರದ ಕೊರತೆ, ಆಶ್ರಯ ಕೊರತೆ, ಮೂಲ ಸೌಕರ್ಯಗಳ ಕೊರತೆ, ನಿರ್ವಹಣೆ ಕೊರತೆ, ವಾರ್ಡನ್‌ಗಳ ಕೊರತೆ ಮತ್ತು ಹೀಗೆ ಹತ್ತಾರು ಸಮಸ್ಯೆಗಳನ್ನು ಎದುರಿಸುತ್ತಿವೆ. ಹಾಸ್ಟೆಲ್‌ಗಳು ಮತ್ತು ವಸತಿ ಶಾಲೆಗಳು ದುಸ್ಥಿತಿಯಲ್ಲಿವೆ. ಅಲ್ಲಿ ಸರಿಯಾದ ಶೌಚಗೃಹ, ಸ್ನಾನಗೃಹಗಳು ಇಲ್ಲದೇ ತೆರೆದ ಜಾಗದಲ್ಲಿ ನಿತ್ಯಕರ್ಮಗಳನ್ನು ಪೂರೈಸಬೇಕಿದೆ. ಹೀಗೆ ಹಲವಾರು ಸಮಸ್ಯೆಗಳನ್ನು ಎದುರಿಸುತ್ತಿರುವ ವಸತಿ ಶಾಲೆಗಳು ಮತ್ತು ಹಾಸ್ಟೆಲ್‌ಗಳಲ್ಲಿ ಕಲಿಕೆ ಮಾಡುತ್ತಿರುವ ಸಾವಿರಾರು ವಿದ್ಯಾರ್ಥಿಗಳು ಸಂಕಷ್ಟಲ್ಲಿದ್ದು, ಅವರ ಕಲಿಕೆಗೆ ಕಷ್ಟವಾಗುತ್ತಿರುವ ವಿಷಯವನ್ನು ಸದನದಲ್ಲಿ ಪ್ರಸ್ತಾಪಿಸಬಯಸುತ್ತೇನೆ.

**ಉತ್ತರ:**

- ಪರಿಶಿಷ್ಟ ವರ್ಗಗಳ ಕಲ್ಯಾಣ ಇಲಾಖಾವತಿಯಿಂದ 136 ಮೆಟ್ರಿಕ್ ಪೂರ್ವ ವಿದ್ಯಾರ್ಥಿನಿಲಯಗಳು, 134 ಮೆಟ್ರಿಕ್ ನಂತರದ ವಿದ್ಯಾರ್ಥಿನಿಲಯಗಳು ಹಾಗೂ 119 ಮಹರ್ಷಿ ವಾಲ್ಮೀಕಿ ಆದಿವಾಸಿ ಬುಡಕಟ್ಟು ವಸತಿ ಶಾಲೆಗಳು ಸೇರಿ ಒಟ್ಟು 389 ಸಂಸ್ಥೆಗಳು ಕಾರ್ಯನಿರ್ವಹಿಸುತ್ತಿವೆ.
- ಪ್ರಸ್ತುತ ಅಗತ್ಯ ಮೂಲಭೂತ ಸೌಕರ್ಯಗಳನ್ನೊಳಗೊಂಡ 45 ವಿದ್ಯಾರ್ಥಿನಿಲಯಗಳು ಹಾಗೂ ಮಹರ್ಷಿ ವಾಲ್ಮೀಕಿ ಆದಿವಾಸಿ ಬುಡಕಟ್ಟು ವಸತಿ ಶಾಲೆಗಳಿಗೆ ಸ್ವಂತ ಕಟ್ಟಡಗಳನ್ನು ನಿರ್ಮಾಣ ಮಾಡಲು ಕ್ರಮವಹಿಸಲಾಗಿದ್ದು, ಕಾಮಗಾರಿಗಳು ವಿವಿಧ ಹಂತಗಳಲ್ಲಿ ಪ್ರಗತಿಯಲ್ಲಿರುತ್ತವೆ. ಮುಂದುವರೆದು, ಹೊಸದಾಗಿ 14 ಮೆಟ್ರಿಕ್ ನಂತರದ ವಿದ್ಯಾರ್ಥಿನಿಲಯಗಳಿಗೆ **ರೂ.72.00** ಕೋಟಿಗಳ ವೆಚ್ಚದಲ್ಲಿ ಸ್ವಂತ ಕಟ್ಟಡಗಳನ್ನು ನಿರ್ಮಾಣ ಮಾಡಲು ಕ್ರಮವಹಿಸಲಾಗುತ್ತಿದೆ.
- ವಿದ್ಯಾರ್ಥಿನಿಲಯಗಳು ಹಾಗೂ ಮಹರ್ಷಿ ವಾಲ್ಮೀಕಿ ಆದಿವಾಸಿ ಬುಡಕಟ್ಟು ವಸತಿ ಶಾಲೆಗಳಲ್ಲಿನ ವಿದ್ಯಾರ್ಥಿಗಳಿಗೆ 2024-25ನೇ ಸಾಲಿನಿಂದ **ರೂ.100/-ಗಳ** ಭೋಜನಾ ವೆಚ್ಚವನ್ನು ಹೆಚ್ಚಳ ಮಾಡಲಾಗಿದ್ದು, ಈ ಕೆಳಕಂಡಂತೆ ಮಾಹೆಯಾನ ಭೋಜನಾ ವೆಚ್ಚವನ್ನು ಭರಿಸುತ್ತಿದ್ದು, ಉತ್ತಮ ಗುಣಮಟ್ಟದ ಆಹಾರವನ್ನು ವಿದ್ಯಾರ್ಥಿಗಳಿಗೆ ನೀಡಲಾಗುತ್ತಿದೆ.

| **ಕ್ರ.ಸಂ.** | **ಸಂಸ್ಥೆಗಳ ವಿವರ** | **ಮಾಹೆಯಾನ ಭೋಜನಾ ವೆಚ್ಚ** |
|---|---|---|
| 1 | ಮೆಟ್ರಿಕ್ ಪೂರ್ವ ವಿದ್ಯಾರ್ಥಿನಿಲಯಗಳು | 1750/- |
| 2 | ಮೆಟ್ರಿಕ್ ನಂತರದ ವಿದ್ಯಾರ್ಥಿನಿಲಯಗಳು | 1850/- |
| 3 | ಮಹರ್ಷಿ ವಾಲ್ಮೀಕಿ ಆದಿವಾಸಿ ಬುಡಕಟ್ಟು ವಸತಿ ಶಾಲೆಗಳು | 1550/- |

- ವಿದ್ಯಾರ್ಥಿನಿಲಯಗಳಿಗೆ ಪ್ರವೇಶ ಕೋರಿ ಆನ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸುವ ಎಲ್ಲಾ ಅರ್ಹ ವಿದ್ಯಾರ್ಥಿಗಳಿಗೆ ಅವರು ಕೋರಿರುವ ವಿದ್ಯಾರ್ಥಿನಿಲಯಗಳಲ್ಲಿ ಅಥವಾ ಸಮೀಪದಲ್ಲಿರುವ ವಿದ್ಯಾರ್ಥಿನಿಯಗಳಲ್ಲಿ ಪ್ರವೇಶ ಕಲ್ಪಿಸಲಾಗುತ್ತಿದ್ದು, ಪ್ರತಿ ವರ್ಷ ಸಮವಸ್ತ್ರ, ಶೂ&ಸಾಕ್ಸ್, ಶುಚಿ ಸಂಭ್ರಮ ಕಿಟ್, ಲೇಖನ ಸಾಮಗ್ರಿಗಳು, ಟೂ-ಟಯರ್ ಕಾಟ್, ಹಾಸಿಗೆ, ಹೊದಿಕೆ, ಜಮಖಾನ ಹಾಗೂ ಡೈನಿಂಗ್ ಟೇಬಲ್ ಇತ್ಯಾದಿ ಅಗತ್ಯ ಮೂಲಭೂತ ಸೌಕರ್ಯಗಳನ್ನು ಕಲ್ಪಿಸಲಾಗುತ್ತಿದೆ.

- 2023-24ನೇ ಸಾಲಿನಲ್ಲಿ 1 ರಿಂದ 10ನೇ ತರಗತಿಯಲ್ಲಿ ವ್ಯಾಸಂಗ ಮಾಡುತ್ತಿದ್ದ **290546** ವಿದ್ಯಾರ್ಥಿಗಳಿಗೆ **ರೂ.50.47** ಕೋಟಿಗಳ ಮೆಟ್ರಿಕ್ ಪೂರ್ವ ವಿದ್ಯಾರ್ಥಿವೇತನವನ್ನು ಮಂಜೂರು ಮಾಡಲಾಗಿರುತ್ತದೆ ಹಾಗೂ ಮೆಟ್ರಿಕ್ ನಂತರದ ಕೋರ್ಸ್‌ಗಳಲ್ಲಿ ವ್ಯಾಸಂಗ ಮಾಡುತ್ತಿರುವ **98282** ವಿದ್ಯಾರ್ಥಿಗಳಿಗೆ **ರೂ.131.78** ಕೋಟಿಗಳ ಮೆಟ್ರಿಕ್ ನಂತರದ ವಿದ್ಯಾರ್ಥಿವೇತನವನ್ನು ಮಂಜೂರು ಮಾಡಲಾಗಿದೆ.
- ಮೆಟ್ರಿಕ್ ನಂತರದ ವಿದ್ಯಾರ್ಥಿನಿಲಯಗಳಲ್ಲಿ ನೀಡಲಾಗುತ್ತಿರುವ ಆಹಾರ ಗುಣಮಟ್ಟದ ಬಗ್ಗೆ ಹಾಗೂ ವಿದ್ಯಾರ್ಥಿನಿಲಯಗಳಲ್ಲಿ ಕಂಡುಬರುತ್ತಿರುವ ಸ್ವಚ್ಛತೆಯ ಸಮಸ್ಯೆಗಳನ್ನು ಪರಿಹರಿಸುವ ನಿಟ್ಟಿನಲ್ಲಿ ವಿದ್ಯಾರ್ಥಿಗಳ ಸಹಭಾಗಿತ್ವದಲ್ಲಿ Mess Committee ಹಾಗೂ Sanitation Committee ಯನ್ನು ರಚಿಸಲಾಗಿರುತ್ತದೆ. ಅದರಂತೆ ವಿದ್ಯಾರ್ಥಿಗಳು ಸಹ ಪ್ರತಿನಿತ್ಯ ಮೆನು ಚಾರ್ಟ್ ಪ್ರಕಾರ ಉತ್ತಮ ಆಹಾರವನ್ನು ನೀಡುವ ಬಗ್ಗೆ ಪರಿಶೀಲಿಸಬಹುದಾಗಿರುತ್ತದೆ.
- ವಿದ್ಯಾರ್ಥಿನಿಲಯಗಳ ಸಮರ್ಪಕ ನಿರ್ವಹಣೆಗಾಗಿ ತಹಶೀಲ್ದಾರರು ಆಯಾ ಉಪವಿಭಾಗದ ಉಪವಿಭಾಗಾಧಿಕಾರಿಗಳು ವಿದ್ಯಾರ್ಥಿನಿಲಯಗಳಿಗೆ ಅನಿರೀಕ್ಷಿತ ಭೇಟಿ ನೀಡಿ ತಪಾಸಣೆ ಮಾಡುತ್ತಿದ್ದು, ಭೇಟಿ ನೀಡಿದ ಸಂದರ್ಭದಲ್ಲಿ ವಿದ್ಯಾರ್ಥಿನಿಲಯಗಳ ಸಮರ್ಪಕ ನಿರ್ವಹಣೆಯ ಬಗ್ಗೆ ಪರಿಶೀಲಿಸಿ ಸಂಬಂಧಪಟ್ಟ ಜಿಲ್ಲಾ/ತಾಲ್ಲೂಕು ಮಟ್ಟದ ಅಧಿಕಾರಿಗಳು ಹಾಗೂ ನಿಲಯ ಮೇಲ್ವಿಚಾರಕರುಗಳಿಗೆ ಸೂಕ್ತ ನಿರ್ದೇಶನಗಳನ್ನು ನೀಡಲಾಗುತ್ತಿದೆ.
- ವಿದ್ಯಾರ್ಥಿನಿಲಯಗಳಲ್ಲಿ ಪ್ರವೇಶ ಪಡೆಯುವ ವಿದ್ಯಾರ್ಥಿಗಳ ಸಂಖ್ಯೆಗನುಗುಣವಾಗಿ ಸ್ನಾನದ ಗೃಹಗಳು ಹಾಗೂ ಶೌಚಾಲಯಗಳನ್ನು ನಿರ್ಮಾಣ ಮಾಡಲಾಗಿದ್ದು, ವಿದ್ಯಾರ್ಥಿನಿಲಯಗಳಿಗೆ ಮಂಜೂರಾತಿ ಸಂಖ್ಯೆಗಿಂತ ಹೆಚ್ಚಿನ ವಿದ್ಯಾರ್ಥಿಗಳು ದಾಖಲಾಗುತ್ತಿರುವುದರಿಂದ ಹಾಲಿ ಇರುವ ಕಟ್ಟಡಗಳಲ್ಲಿ ಸ್ಥಳಾವಕಾಶ ಕೊರತೆಯಾದಲ್ಲಿ ಹೆಚ್ಚುವರಿ ಕಟ್ಟಡಗಳನ್ನು ಬಾಡಿಗೆ ಪಡೆದು ನಿರ್ವಹಿಸಲಾಗುತ್ತಿದೆ. ಮುಂದುವರೆದು, 2023-24ನೇ ಸಾಲಿನಲ್ಲಿ ಹೆಚ್ಚಿನ ವಿದ್ಯಾರ್ಥಿಗಳು ದಾಖಲಾಗಿರುವ 10 ವಿದ್ಯಾರ್ಥಿನಿಲಯಗಳಲ್ಲಿ **ರೂ.5.00** ಕೋಟಿಗಳ ವೆಚ್ಚದಲ್ಲಿ ಹೆಚ್ಚುವರಿ ಸ್ನಾನದ ಗೃಹ ಹಾಗೂ ಶೌಚಾಲಯಗಳನ್ನು ನಿರ್ಮಾಣ ಮಾಡಲು ಕ್ರಮ ಕೈಗೊಳ್ಳುವ ಮೂಲಕ ವಿದ್ಯಾರ್ಥಿಗಳ ಸಮಸ್ಯೆಗಳನ್ನು ಪರಿಹರಿಸಲು ಕ್ರಮಕೈಗೊಳ್ಳಲಾಗುತ್ತಿದೆ.

**ಕಡತ ಸಂಖ್ಯೆ: STW/SECB/SAD/110/2024**

(ಸಿದ್ದರಾಮಯ್ಯ)
ಮುಖ್ಯಮಂತ್ರಿ